ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 25–10–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | **Inauguration of Akshar Power Yoga Academy<br>Chief Guest:<br>Sri R. Roshan Baig,<br>Minister for Infrastructure Development, Information and Haj<br><br>R.S.V.P.<br>Sri G. Shivarudraiah<br>98442 54054** | **26-10-2014<br>Sunday<br>11-00 A.M.** | **Akshar Power Yoga Academy<br>No. 58/3 Outer Ring Road, Hebbal,<br>Bangalore-560 024<br>Landmark Next to Big Bazaar,<br>GR Kalyana Mantap** |
| 2 | ಜಾಗೃತಿ ಅರಿವಿನ ಸಪ್ತಾಹ:<br>ಪ್ರತಿಜ್ಞಾ ವಚನ ಬೋದನೆ<br>ಶ್ರೀ ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ | 27–10–2014<br>ಸೋಮವಾರ<br>ಬೆಳಿಗ್ಗೆ<br>11–00 ಗಂಟೆಗೆ | ಕೊಠಡಿ ಸಂಖ್ಯೆ 419, ಸಮ್ಮೇಳನ ಸಭಾಂಗಣ,<br>4 ನೇ ಮಹಡಿ,<br>ವಿಕಾಸ ಸೌಧ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ನೂತನ ರಾಜ್ಯ ಮಾಹಿತಿ ಆಯುಕ್ತರುಗಳ ಗೌಪ್ಯತಾ ಪ್ರಮಾಣ ವಚನ ಸ್ವೀಕಾರ ಸಮಾರಂಭ

**ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ)**

ಕರ್ನಾಟಕದ ಘನತೆವೆತ್ತ ರಾಜ್ಯಪಾಲ ಶ್ರೀ ವಾಜುಭಾಯಿ ವಾಲ ಅವರು ಅಕ್ಟೋಬರ್ 28 ರಂದು ಮಂಗಳವಾರ ಸಂಜೆ 5-00 ಗಂಟೆಗೆ ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ನೂತನ ರಾಜ್ಯ ಮಾಹಿತಿ ಆಯುಕ್ತರುಗಳಿಗೆ ಅಧಿಕಾರ ಮತ್ತು ಗೌಪ್ಯತಾ ಪ್ರಮಾಣವಚನವನ್ನು ಬೆಂಗಳೂರಿನ ರಾಜಭವನದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಬೋಧಿಸುವರು ಎಂದು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

## ಸಕಾಲ ಮಿಷನ್‌ಗೆ ಪ್ರತಿಷ್ಠಿತ "ಕಪಾಮ್: ಪ್ರಶಸ್ತಿ : ಶ್ರೀ ಟಿ.ಬಿ ಜಯಚಂದ್ರ

**ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ)**

ಕರ್ನಾಟಕ ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಯಾದ 'ಸಕಾಲ' ಕ್ಕೆ 2014 ನೇ ಸಾಲಿನ ಪ್ರತಿಷ್ಠಿತ "ಕಪಾಮ್" ಪ್ರಶಸ್ತಿ ಲಭಿಸಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಪಶುಸಂಗೋಪನಾ ಖಾತೆ ಸಚಿವ ಶ್ರೀ ಟಿ.ಬಿ. ಜಯಚಂದ್ರ ಅವರು ತಿಳಿಸಿದರು.

ವಿಧಾನ ಸೌಧದ ತಮ್ಮ ಕಚೇರಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು "ಕಪಾಮ್" (ಕಾಮನ್‌ವೆಲ್ತ್- ಅಸೋಸಿಯೇಷನ್ ಫಾರ್ ಪಬ್ಲಿಕ್ ಅಡ್ಮಿನಿಸ್ಟ್ರೇಷನ್ ಅಂಡ್ ಮ್ಯಾನೇಜ್‌ಮೆಂಟ್) ಇನ್ನೋವೇಷನ್ ಪ್ರಶಸ್ತಿಯು ಸಾರ್ವಜನಿಕ ಸೇವೆಯಲ್ಲಿ ನಾವಿನ್ಯತೆಯನ್ನು ಗುರುತಿಸುವ ಏಕೈಕ ಅಂತರರಾಷ್ಟ್ರೀಯ ಪ್ರಶಸ್ತಿಯಾಗಿದೆ ಎಂದ ಶ್ರೀ ಟಿ. ಬಿ. ಜಯಚಂದ್ರ ಅವರು ನಿರ್ದಿಷ್ಟ ಸಮಯದೊಳಗೆ ಸಾರ್ವಜನಿಕರಿಗೆ ಸರ್ಕಾರಿ ಸೇವೆಯನ್ನು ಒದಗಿಸುವಲ್ಲಿ ಸಕಾಲ ಮಿಷನ್ ಮಹತ್ವದ ಪಾತ್ರ ವಹಿಸಿದ ಪರಿಣಾಮವಾಗಿ ರಾಜ್ಯಕ್ಕೆ 'ಕಪಾಮ್' ಪ್ರಶಸ್ತಿ ದೊರಕಿದೆ ಎಂದರು.

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಆಡಳಿತ ಸುಧಾರಣೆ) ಇಲಾಖೆಯು ರಾಜ್ಯದಲ್ಲಿ ನಾಗರೀಕರಿಗೆ ಕಾಲಮಿತಿಯೊಳಗೆ ಸೇವೆಗಳನ್ನು ಒದಗಿಸಲು ಸರ್ಕಾರದ ವತಿಯಿಂದ ಜಾರಿಗೆ ತಂದಿರುವ "ಸಕಾಲ" ಯೋಜನೆಯು ಯಶಸ್ವಿಯಾಗಿ ಅನುಷ್ಠಾನಗೊಂಡಿದ್ದು, ಸದರಿ ಯೋಜನೆ ಕುರಿತು ನಾಗರಿಕ ಕೇಂದ್ರಿತ ಯೋಜನೆಯ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸದರಿ ಪ್ರಶಸ್ತಿಗೆ ನಾಮ ನಿರ್ದೇಶನ ಮಾಡಲು 2014 ರ ಏಪ್ರಿಲ್ ತಿಂಗಳಲ್ಲಿ ಕೋರಿಕೆಯನ್ನು ಸಲ್ಲಿಸಿಲಾಗಿತ್ತು ಎಂದ ಸಚಿವರು ಕೇಂದ್ರ ಸರ್ಕಾರದ ಪ್ರಸ್ತಾವನೆಯನ್ನು "ಕಪಾಮ್" ಪರಿಗಣಿಸಿ ರಾಜ್ಯದ ಸಕಾಲ ಮಿಷನ್ ಕಾರ್ಯವೈಖರಿ ಪರಿಶೀಲನೆ ಮಾಡಿ "ಕಪಾಮ್" ಪ್ರಶಸ್ತಿ ನೀಡಿದೆ ಎಂದು ತಿಳಿಸಿದರು.

ಸಕಾಲ ಯೋಜನೆಯಡಿ ಈವರೆಗೆ 6,11,38,245 ಅರ್ಜಿಗಳು ಬಂದಿದ್ದು ಸುಮಾರು 63,65,645 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ಎಂದ ಶ್ರೀ ಟಿ. ಬಿ. ಜಯಚಂದ್ರ ಅವರು ರಾಜ್ಯದ 6 ಲಕ್ಷ ಸರ್ಕಾರಿ ನೌಕರರು ಈ ಪ್ರಶಸ್ತಿ ಲಭಿಸಲು ಕಾರಣಕರ್ತರಾಗಿದ್ದಾರೆ. ಹಾಗೂ ಈ ಪ್ರಶಸ್ತಿ ಬರಲು ಕಾರಣಕರ್ತರಾದವರೆಲ್ಲರಿಗೂ ಈ ಪ್ರಶಸ್ತಿಯನ್ನು ಸಮರ್ಪಿಸುವುದಾಗಿ ಹೇಳಿದರು.

ಸಚಿವಾಲಯದಲ್ಲಿ ಕಡತ ವಿಲೇವಾರಿ ಮಾಡಿದಂತೆ ಜಿಲ್ಲೆ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ನವೆಂಬರ್ ತಿಂಗಳಲ್ಲಿ ಕಡತ ವಿಲೇವಾರಿ ಮಾಡಲು ಈಗಾಗಲೇ ಸುತ್ತೋಲೆ ಹೊರಡಿಸಲಾಗಿದೆ ಎಂದ ಸಚಿವರು ಕರ್ನಾಟಕ ಸಕಾರ ಉತ್ತಮ ಆಡಳಿತ ನೀಡುವಲ್ಲಿ ಸದಾ ಮುಂಚೂಣಿಯಲ್ಲಿದೆ ಎಂದರು.

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ (ಆಡಳಿತ ಸುಧಾರಣೆ) ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಎಂ.ವಿ. ಜಯಂತಿ ಅವರು ಸೇರಿದಂತೆ ಇತರೆ ಅಧಿಕಾರಿಗಳು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

ಬಾಬು/ಕೆಪಿಪಿ/ಕೆಎಂ

## ಸಚಿವರ ಅಭಿನಂದನೆ

**ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ)**

ವಿಶ್ವ ಬಿಲಿಯರ್ಡ್ಸ್ ಚಾಂಪಿಯನ್‌ಶಿಪ್ ಗೆದ್ದ ಶ್ರೀ ಪಂಕಜ್ ಅದ್ವಾನಿ ಅವರನ್ನು ರಾಜ್ಯ ಯುವಜನ ಸೇವಾ ಮತ್ತು ಕ್ರೀಡಾ ಖಾತೆ ಸಚಿವ ಶ್ರೀ ಕೆ. ಅಭಯಚಂದ್ರ ಅವರು ಅಭಿನಂದಿಸಿದ್ದಾರೆ.

ಶ್ರೀ ಪಂಕಜ್ ಅದ್ವಾನಿ ಅವರು ವಿಶ್ವ ಬಿಲಿಯರ್ಡ್ಸ್ ಚಾಂಪಿಯನ್‌ಶಿಪ್ ಗೆಲ್ಲುವ ಮೂಲಕ ದೇಶದ ಹಾಗೂ ರಾಜ್ಯದ ಗೌರವ ಎತ್ತಿ ಹಿಡಿದಿದ್ದು ರಾಜ್ಯ ಸರ್ಕಾರ ಹಾಗೂ ಇಲಾಖೆಯ ಪರವಾಗಿ ಅವರನ್ನು ಅಭಿನಂದಿಸುತ್ತಿರುವುದಾಗಿ ಸಚಿವರು ತಿಳಿಸಿದ್ದಾರೆ.

ಬಾಬು/ಕೆಎಂ

## ವೇಳಾಪಟ್ಟಿಯಲ್ಲಿ ಸೂಕ್ತ ಬದಲಾವಣೆ

**ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಬೋಧಕ/ಬೋಧಕೇತರ ಹುದ್ದೆಗಳ ನೇಮಕಾತಿಗೆ ಪರೀಕ್ಷೆ ದಿನಾಂಕವನ್ನು ಪ್ರಕಟಿಸಿದೆ. ಕೆಲವು ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ್ದು ಸ್ಪರ್ಧಾತ್ಮಕ ಪರೀಕ್ಷೆಯ ನಿರ್ದಿಷ್ಟ ಪತ್ರಿಕೆಯು ಅರ್ಜಿ ಸಲ್ಲಿಸಿರುವ ಹುದ್ದೆಗಳಿಗೆ ಒಂದೇ ದಿನಾಂಕ ಹಾಗೂ ವೇಳೆಯಲ್ಲಿಯರುವುದರಿಂದ ತೊಂದರೆಯಾಗುತ್ತಿದೆ ಎಂದು ಮನವಿ ಸಲ್ಲಿಸಿರುವ ಹಿನ್ನೆಲೆಯಲ್ಲಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ನಂತರ ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ವಿವರವನ್ನು ಪಡೆದು ವೇಳಾಪಟ್ಟಿಯನ್ನು ಸೂಕ್ತ ತಿದ್ದುಪಡಿ ಮಾಡಲಾಗುವುದು.

ಸ್ಪರ್ಧಾತ್ಮಕ ಪರೀಕ್ಷೆಯ ಸಾಮಾನ್ಯ ಪತ್ರಿಕೆಯ ಎರಡು ಮಟ್ಟದಲ್ಲಿ ನಡೆಸಲಾಗುತ್ತಿದ್ದು, ಅಂದರೆ ಒಂದು ಪದವಿ ಮಟ್ಟದ ಹಾಗೂ ಇನ್ನೊಂದು ಪದವಿಗಿಂತ ಕಡಿಮೆ ವಿದ್ಯಾರ್ಹತೆ ಮಟ್ಟದಾಗಿರುತ್ತದೆ. ಅಭ್ಯರ್ಥಿಗಳು ಸದರಿ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ನಿಮಯಗಳಲ್ಲಿ ಪದವಿ ಮಟ್ಟದ ವಿದ್ಯಾರ್ಹತೆಯನ್ನೊಳಗೊಂಡ ಅವರು ಅರ್ಜಿ ಸಲ್ಲಿಸಿದ ಎಲ್ಲಾ ಹುದ್ದೆಗಳಿಗೆ ಪರಿಗಣಿಸಲಾಗುವುದು. ಇದೇ ರೀತಿ ವಾರ್ಡ್‌ನ್/ನಿಲಯ ಮೇಲ್ವಿಚಾರಕರ ಹುದ್ದೆಗಳ ನಿರ್ದಿಷ್ಟ ಪತ್ರಿಕೆಗೆ ಏಕರೂಪ ಪಠ್ಯಕ್ರಮವಿರುವುದರಿಂದ ಈ ಪರೀಕ್ಷೆಯಲ್ಲಿ ಗಳಿಸಿದ

ಅಂಕಗಳನ್ನು ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ ಎಲ್ಲಾ ವಾರ್ಡನ್/ನಿಲಯ ಮೇಲ್ವಿಚಾರಕರ ಹುದ್ದೆಗಳಿಗೆ ಪರಿಗಣಿಸಲಾಗುವುದು. ಮುಂದುವರೆದು, ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಾದಲ್ಲಿ ಅವರಿಂದ ಹುದ್ದೆಗಳ ಆಯ್ಕೆಯ ಆದ್ಯತೆಯನ್ನು ಪಡೆದು ಅದರಂತೆ ಆಯ್ಕೆ ಮಾಡಲಾಗುವುದು ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಬಾಬು/ಕೆಎಂ

## ಕೊಡಗು ಸೈನಿಕ ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ)**

ಕೊಡಗು ಜಿಲ್ಲೆಯಲ್ಲಿರುವ ಸೈನಿಕ ಶಾಲೆಗೆ ರಾಷ್ಟ್ರೀಯ ರಕ್ಷಣಾ ಅಕಾಡೆಮಿ/ಭಾರತೀಯ ನೌಕಾ ಅಕಾಡೆಮಿಗೆ ಸೇರಿಸಲು 2015-16 ನೇ ಸಾಲಿನ 6 ಮತ್ತು 9 ನೇ ತರಗತಿಯ ಪ್ರವೇಶ ದಾಖಲಾತಿಗಾಗಿ ವಿದ್ಯಾರ್ಥಿಗಳನ್ನು ಆಯ್ಕೆಮಾಡಿ ತರಬೇತಿಗೊಳಿಸಲು ಅರ್ಜಿ ಆಹ್ವಾನಿಸಲಾಗಿದೆ.

ಪ್ರವೇಶ ಪರೀಕ್ಷೆಯು 2015 ರ ಜನವರಿ 4 ರಂದು ನಡೆಸಲಾಗುವುದು. ಅರ್ಜಿಗಳನ್ನು 2014 ರ ನವೆಂಬರ್ 29 ರವರೆಗೆ ವಿತರಿಸಲಿದ್ದು, ಡಿಸೆಂಬರ್ 6 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 08276 – 278963 ಅಥವಾ www.sainikschoolkodagu.edu.in ಸಂಪರ್ಕಿಸಬಹುದು.

**ಬಾಬು:ಕೆಎಂ**

## ಜಾಗೃತಿ ಅರಿವು ಸಪ್ತಾಹ

**ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ)**

**ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಿಸಲು ಅಕ್ಟೋಬರ್ 27 ರಿಂದ ನವೆಂಬರ್ 1 ರವರೆಗೆ ರಾಜ್ಯಾದ್ಯಂತ ಜಾಗೃತಿ ಅರಿವು ಸಪ್ತಾಹವನ್ನು ಆಚರಿಸಲಾಗುತ್ತಿದೆ. ಈ ಕಾರ್ಯಕ್ರಮವನ್ನು ರಾಜ್ಯದ ಎಲ್ಲಾ ಇಲಾಖೆಗಳು ಹಾಗೂ ಸರ್ಕಾರಿ ಕಚೇರಿಗಳಲ್ಲಿ ಆಚರಿಸಲು ಸರ್ಕಾರವು ಸುತ್ತೋಲೆ ಹೊರಡಿಸಿದೆ.**

**ಸಪ್ತಾಹದ ಆಚರಣೆಯ ಸಮಯದಲ್ಲಿ ಪ್ರಮುಖ ಸ್ಥಳಗಳಲ್ಲಿ ಭಿತ್ತಿ ಪತ್ರಗಳನ್ನು ಪ್ರದರ್ಶಿಸುವುದು, ವಿಚಾರಗೋಷ್ಠಿಯನ್ನು ಆಯೋಜಿಸುವುದು, ಭ್ರಷ್ಟಾಚಾರ ವಿರೋಧಿ ವಿಷಯಗಳ ಕುರಿತಂತೆ ಚರ್ಚಾ ಸ್ಪರ್ಧೆಗಳು, ಭಾಷಣಗಳನ್ನು ಶಾಲಾ ಕಾಲೇಜುಗಳಲ್ಲಿ ಆಯೋಜಿಸುವುದು ಮತ್ತು ಬಹುಮಾನಗಳನ್ನು ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವಂತೆ ಸುತ್ತೋಲೆಯಲ್ಲಿ ಸೂಚಿಸಲಾಗಿದೆ.**

**ಈ ಜಾಗೃತಿ ಸಪ್ತಾಹದಲ್ಲಿ ಸರ್ಕಾರೇತರ ಸಂಸ್ಥೆಗಳು ಮತ್ತು ಸೇವಾ ಸಂಸ್ಥೆಗಳು ಭಾಗಹಿಸುವಂತೆ ಮತ್ತು ಈ ಸಂಬಂಧ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳುವಂತೆ ಸೂಚಿಸಲಾಗಿದೆ.**

ಅಲ್ಲದೆ, ಅಕ್ಟೋಬರ್ 27 ರಂದು ಪೂರ್ವಾಹ್ನ ಬೆಳಿಗ್ಗೆ 11-00 ಗಂಟೆಗೆ ಸರ್ಕಾರದ ಎಲ್ಲಾ ಇಲಾಖೆಗಳು ಮತ್ತು ಕಚೇರಿಗಳಲ್ಲಿ ಜಾಗೃತಿ ಅರಿವು ಸಪ್ತಾಹ ಕುರಿತ ಪ್ರತಿಜ್ಞಾ ವಚನ ಸ್ವೀಕರಿಸಲು ಸೂಚಿಸಲಾಗಿದೆ.

ಬಾಬು:ಕೆಎಂ

# ಪ್ರತಿಜ್ಞಾ ವಚನ ಸ್ವೀಕಾರ:

ಬೆಂಗಳೂರು, ಅಕ್ಟೋಬರ್ 25 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಅಕ್ಟೋಬರ್ 27 ರಿಂದ ನವೆಂಬರ್ 1 ರವರೆಗೆ ಹಮ್ಮಿಕೊಂಡಿರುವ ಜಾಗೃತಿ ಅರಿವು ಸಪ್ತಾಹದ ಅಂಗವಾಗಿ ಕರ್ನಾಟಕ ಸಚಿವಾಲಯದಲ್ಲಿ ಅಕ್ಟೋಬರ್ 27 ರಂದು ಪೂರ್ವಾಹ್ನ 11-00 ಗಂಟೆಗೆ ಪ್ರತಿಜ್ಞಾ ವಚನವನ್ನು ತೆಗೆದುಕೊಳ್ಳುವ ಮೂಲಕ ಸಪ್ತಾಹವನ್ನು ಆಚರಿಸಲಾಗುವುದು.

ಅಂದು ಬೆಳಿಗ್ಗೆ 11-00 ಗಂಟೆಗೆ ವಿಕಾಸಸೌಧದ ಸಮ್ಮೇಳನದ ಸಭಾಂಗಣದಲ್ಲಿ (ಕೊಠಡಿ ಸಂಖ್ಯೆ 419, 4ನೇ ಮಹಡಿ, ವಿಕಾಸಸೌಧ) ರಾಜ್ಯದ ಮುಖ್ಯಮಂತ್ರಿಯವರು ಕರ್ನಾಟಕ ಸಚಿವಾಲಯದ ಎಲ್ಲಾ ಇಲಾಖೆಗಳ ಅಧಿಕಾರಿ, ನೌಕರರಿಗೆ ಪ್ರತಿಜ್ಞಾ ವಚನವನ್ನು ಬೋಧಿಸುವರು.

ಬಾಬು:ಕೆಎಂ